# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 524 (611)
ಮಾನ್ಯ ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 11.07.2023
ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ) | ಗ್ರಾಮೀಣ ಭಾಗದ ಜನತೆಗೆ ಉದ್ಯೋಗ ನೀಡುವ ಸಲುವಾಗಿ ಮತ್ತು ಬೆಂಗಳೂರಿನ ಮೇಲಿನ ಒತ್ತಡ ಕಡಿಮೆ ಮಾಡುವ ಸಲುವಾಗಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಕೆಐಎಡಿಬಿ ಯು ಹೊಸ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಾಡುವ ಯೋಜನೆಗಳು ಸರ್ಕಾರದ ಮುಂದಿದೆಯೇ; | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಬೆಂಗಳೂರು ಹೊರತುಪಡಿಸಿ ತುಮಕೂರು, ಕಲಬುರಗಿ, ಬಳ್ಳಾರಿ, ಬೆಳಗಾವಿ, ಧಾರವಾಡ, ರಾಯಚೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಹೊಸ ಕೈಗಾರಿಕಾ ಪ್ರದೇಶಗಳನ್ನು ನಿರ್ಮಿಸುವ ಯೋಜನೆಗಳನ್ನು ಕೈಗೊಳ್ಳಲಾಗಿದೆ.<br><br>ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. |
| ಆ) | ಹಾಗಿದ್ದಲ್ಲಿ, ಯಾವ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶ ಅಭಿವೃದ್ಧಿಗೆ ಯೋಜನೆಯನ್ನು ಹಮ್ಮಿಕೊಂಡಿದೆ; ಸದರಿ ಕೈಗಾರಿಕಾ ಪ್ರದೇಶದ ವ್ಯಾಪ್ತಿ ಎಷ್ಟು; ಯಾವ ಹಳ್ಳಿಗಳು ಸದರಿ ವ್ಯಾಪ್ತಿಗೆ ಸೇರಲಿವೆ? (ಜಿಲ್ಲೆ ಮತ್ತು ಗ್ರಾಮದ ವಿವರ ನೀಡುವುದು) | |
| ಇ) | ಸದರಿ ಕೈಗಾರಿಕಾ ಪ್ರದೇಶದ ಅಭಿವೃದ್ಧಿ ಯಿಂದಾಗಿ ಭೂಮಿಯನ್ನು ಕಳೆದುಕೊಳ್ಳುವ ರೈತರಿಗೆ ನೀಡುವ ಪರಿಹಾರವೇನು; | ಕೆಐಎಡಿ ಕಾಯ್ದೆ ಕಲಂ 28(4)ರಡಿ ಅಂತಿಮ ಅಧಿಸೂಚನೆ ಹೊರಡಿಸಿ ಸ್ವಾಧೀನಪಡಿಸಿ ಕೊಳ್ಳುವ ಜಮೀನುಗಳಿಗೆ ಭೂಪರಿಹಾರ ದರ ನಿಗಧಿಪಡಿಸುವ ಸಲುವಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿ/ಮಂಡಳಿಯ ವಿಶೇಷ ಜಿಲ್ಲಾಧಿಕಾರಿ ಯವರ ಅಧ್ಯಕ್ಷತೆಯಲ್ಲಿ ಜರುಗುವ ಭೂದರ ನಿರ್ಧರಣಾ ಸಲಹಾ ಸಮಿತಿ ಸಭೆಯಲ್ಲಿ ಭೂ ಮಾಲೀಕರೊಂದಿಗೆ ಸಮಾಲೋಚಿಸಿ ಪ್ರಸ್ತಾವಿತ ಪ್ರದೇಶದಲ್ಲಿನ ಮಾರ್ಗಸೂಚಿ ದರ ಮತ್ತು ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಹಿಂದಿನ 3 ವರ್ಷಗಳ ಮಾರಾಟದ ಅಂಕಿ-ಅಂಶಗಳನ್ನು ಪರಿಗಣಿಸಿ ಶಿಫಾರಸ್ಸು ಮಾಡುವ ದರಕ್ಕೆ ಮಂಡಳಿ ಸಭೆಯ ಅನುಮೋದನೆ ಪಡೆದು ನಿಯಮಾನುಸಾರ ಪರಿಹಾರ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತದೆ. |

| | | |
|---|---|---|
| | | ಮುಂದುವರೆದು, ಕೈಗಾರಿಕಾ ಪ್ರದೇಶಕ್ಕಾಗಿ ಸ್ವಾಧೀನಪಡಿಸಿಕೊಳ್ಳುವ ಜಮೀನಿನ ಪರಿಹಾರದ ಬದಲಾಗಿ ಎಕರೆ ಒಂದಕ್ಕೆ 10781 ಚ.ಅ ವಿಸ್ತೀರ್ಣದ ಅಭಿವೃದ್ಧಿಪಡಿಸಿದ ಜಮೀನನ್ನು ಪರಿಹಾರದ ರೂಪದಲ್ಲಿ ಭೂಮಾಲೀಕರು ಪಡೆಯಬಹುದಾಗಿದೆ. |
| ಈ) | ಸದರಿ ಕೈಗಾರಿಕಾ ಪ್ರದೇಶಾಭಿವೃದ್ಧಿಯಿಂದ ಎಷ್ಟು ಜನತೆಗೆ ಉದ್ಯೋಗ ದೊರೆಯುವ ನಿರೀಕ್ಷೆಯಿದೆ; ಹಾಗೂ ಕೈಗಾರಿಕಾ ಪ್ರದೇಶಾಭಿವೃದ್ಧಿಯನ್ನು ಯಾವ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು? | ಪ್ರಸ್ತಾವಿತ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಗೊಳಿಸಿದ ನಂತರ ವಿವಿಧ ರೀತಿಯ ಕೈಗಾರಿಕೆ ಘಟಕಗಳನ್ನು ಸ್ಥಾಪಿಸಲು ಉದ್ದಿಮೆದಾರರಿಗೆ ಭೂಮಿ ಹಂಚಿಕೆ ಮಾಡಲು ಅವಕಾಶವಿರುತ್ತದೆ.<br><br>ಅಭಿವೃದ್ಧಿಪಡಿಸುತ್ತಿರುವ ಕೈಗಾರಿಕಾ ಪ್ರದೇಶಗಳಲ್ಲಿ ಉದ್ದಿಮೆದಾರರು ಕೈಗಾರಿಕಾ ಘಟಕಗಳು ಸ್ಥಾಪಿಸುವ ಸಲುವಾಗಿ ಸಂಬಂಧಪಟ್ಟ ಅನುಮೋದನಾ ಸಮಿತಿಗಳಿಗೆ ಅರ್ಜಿಯೊಂದಿಗೆ ಸಲ್ಲಿಸುವ ಯೋಜನಾ ವರದಿಯಲ್ಲಿ ಉದ್ಯೋಗದ ಮಾಹಿತಿಯನ್ನು ಸಲ್ಲಿಸುವುದರಿಂದ ಪ್ರಸ್ತುತ ಹಂತದಲ್ಲಿ ಎಷ್ಟು ಜನರಿಗೆ ಉದ್ಯೋಗ ದೊರಕಿಸಲಾಗುವುದು ಎಂಬುದರ ಬಗ್ಗೆ ಅಂದಾಜಿಸಲು ಸಾಧ್ಯವಾಗುವುದಿಲ್ಲ.<br><br>ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಯೋಜನೆಗಳನ್ನು ಅನುಮೋದನೆಗೊಂಡ ನಂತರ ಸುಮಾರು 1 ರಿಂದ 2 ವರ್ಷದೊಳಗೆ ಪೂರ್ಣವಾಗಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ. |

**ಸಂಖ್ಯೆ: ಸಿಐ 145 ಐಎಪಿ 2023**

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು**

# ಅನುಬಂಧ-1

## ಪ್ರಸ್ತಾಪಿತ ಕೈಗಾರಿಕಾ ಪ್ರದೇಶಗಳ ವಿವರಗಳು

| ಕ್ರಮ ಸಂಖ್ಯೆ | ಜಿಲ್ಲೆ | ತಾಲ್ಲೂಕು | ಗ್ರಾಮ | ಕೈಗಾರಿಕಾ ಪ್ರದೇಶ | ವಿಸ್ತೀರ್ಣ (ಎಕರೆಗಳಲ್ಲಿ) | ಷರಾ |
|---|---|---|---|---|---|---|
| 1 | 2 | 3 | 4 | 5 | 6 | 7 |
| 1 | ಕಲಬುರಗಿ | ಕಲಬುರಗಿ | ನಂದೂರು ಕೆಸರಟಗಿ | ನಂದೂರು ಕೆಸರಟಗಿ 3ನೇ ಹಂತ | 595.09 | |
| 2 | ಬಳ್ಳಾರಿ | ಬಳ್ಳಾರಿ | ಸಂಜೀವ್‌ರಾಯನ ಕೋಟೆ | ಸಂಜೀವರಾಯನ ಕೋಟೆ | 154.58 | |
| 3 | ಬೆಳಗಾವಿ | ಬೆಳಗಾವಿ | ಕಣಗಲಾ ಮತ್ತು ಕಾರಜಗ | ಕಣಗಲಾ 2ನೇ ಹಂತ | 576.00 | |
| 4 | ಧಾರವಾಡ | ಧಾರವಾಡ | ಸಿಂಗಹಳ್ಳಿ, ಕುಮ್ಮನಾಯಕನಕೊಪ್ಪ, ಕೋಟೂರು, ಹಗ್ಗೇರಿ, ಗೂಳೇದಕೊಪ್ಪ, ಮಡಿಕೊಪ್ಪ, ವೆಂಕಟಾಪುರ, ಸಿದ್ದಾಪುರ, ವೀರಪುರ, ಹೊಸವಾಲ, ರಾಮಾಪುರ, ವರವಿನಗಳವಿ | ಬೆಂಗಳೂರು ಮುಂಬೈ ಇಂಡಸ್ಟ್ರಿಯಲ್ ಕಾರಿಡಾರ್ (ಧಾರವಾಡ ನೋಡ್) | 6212.00 | ಭಾರತ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಬೆಂಗಳೂರು ಮುಂಬೈ ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ. |
| 5 | ಚಾಮರಾಜನಗರ | ಚಾಮರಾಜನಗರ | ಬದನಗುಪ್ಪೆ ಕೆಲ್ಲಂಬಳ್ಳಿ | ಬದನಗುಪ್ಪೆ 2ನೇ ಹಂತ | 800.00 | |
| 6 | ರಾಯಚೂರು | ರಾಯಚೂರು | ಚಂದ್ರಭಂಡ | ಚಂದ್ರಭಂಡ | 690.00 | |
| 7 | ತುಮಕೂರು | ತುಮಕೂರು | ಗೌಡನಹಳ್ಳಿ, ಸೋರೆಕುಂಟೆ, ಪಿ.ಗೊಲ್ಲಹಳ್ಳಿ, ಪುರದಕುಂಟೆ, ಲಿಂಗನಹಳ್ಳಿ | ಚನ್ನೈ ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ (ತುಮಕೂರು ನೋಡ್) | 8313.00 | ಭಾರತ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಚನ್ನೈ ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ 3 ಹಂತಗಳಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. |
| | | | | ಒಟ್ಟು | 17340.67 | |

ತಾಂತ್ರಿಕ ಸಹಾಯಕರು-2